ರಾಜ್ಯದಲ್ಲಿ ಗುತ್ತಿಗೆ ಆಧಾರದ ಮೇಲೆ ವೈದ್ಯರ ನೇಮಕಾತಿ

2491(3007) ಶ್ರೀ ಅಪ್ಪಚ್ಚು ರಂಜನ್ (ಸೋಮವಾರಪೇಟೆ) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯದಲ್ಲಿ ಗುತ್ತಿಗೆ ಆಧಾರದ ಮೇಲೆ ಎಷ್ಟು ವೈದ್ಯರನ್ನು ನೇಮಕ ಮಾಡಲಾಗಿದೆ; ರಾಜ್ಯದಲ್ಲಿ ಎಷ್ಟು ವೈದ್ಯರ ಹುದ್ದೆ ಖಾಲಿ ಇವೆ, ಕೊಡಗು ಜಿಲ್ಲೆಯಲ್ಲಿ ಎಷ್ಟು ಹುದ್ದೆ ಖಾಲಿ ಇದೆ? (ತಾಲ್ಲೂಕುವಾರು ವಿವರ ನೀಡುವುದು)

ಡಾ: ಎ.ಬಿ. ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :—

| | | |
|---|---|---|
| ಅ) ಗುತ್ತಿಗೆ ಆಧಾರದ ಮೇಲೆ ನೇಮಕವಾಗಿರುವ ವೈದ್ಯರ ಸಂಖ್ಯೆ | - | 12253 |
| ಖಾಲಿ ಇರುವ ವೈದ್ಯರ ಹುದ್ದೆಗಳು | - | 608 |
| ಕೊಡಗು ಜಿಲ್ಲೆಯಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳ ವಿವರ (ತಾಲ್ಲೂಕುವಾರು ವಿವರ) | | |
| ವಿರಾಜಪೇಟೆ | - | 18 |
| ಸೋಮವಾರಪೇಟೆ | - | 12 |
| ಮಡಕೇರಿ | - | 23 |

ಸೋಮವಾರಪೇಟೆ ಆಲೂರು ಸಿದ್ದಾಪುರ ಸರ್ಕಾರಿ ಕಿರಿಯ ಕಾಲೇಜಿನ ಉಪನ್ಯಾಸಕರ ಹುದ್ದೆಗಳ ಭರ್ತಿ

2493(3348) ಶ್ರೀ ಅಪ್ಪಚ್ಚು ರಂಜನ್ (ಸೋಮವಾರಪೇಟೆ) :— ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಸೋಮವಾರ ಪೇಟೆ ತಾಲ್ಲೂಕು ಆಲೂರ ಸಿದ್ದಾಪುರ ಸರ್ಕಾರಿ ಕಿರಿಯ ಕಾಲೇಜಿಗೆ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

ಆ) ಈ ಪೈಕಿ ಖಾಲಿ ಇರುವ ಹುದ್ದೆಗಳೆಷ್ಟು? ಉಪನ್ಯಾಸಕರ ಹುದ್ದೆ ಖಾಲಿ ಇರುವುದರಿಂದ ಫಲಿತಾಂಶದ ಮೇಲೆ ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಈ ಹುದ್ದೆಗಳನ್ನು ಎಂದು ಭರ್ತಿ ಮಾಡಲಾಗುವುದು?